ಇಂಜಿನಿಯರಿಂಗ್ ಕಾಲೇಜು ಮಂಜೂರು

38 (27)

ಶ್ರೀ ಮಾನಪ್ಪ ವಜ್ಜಲ್ (ಲಿಂಗಸುಗೂರು)

ಅ) ರಾಯಚೂರು ಜಿಲ್ಲೆ ಲಿಂಗಸುಗೂರು ವಿಧಾನಸಭಾ ಮತಕ್ಷೇತ್ರಕ್ಕೆ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ. ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆ ಇವುಗಳನ್ನು ಆಧರಿಸಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು

30 (50)

ಶ್ರೀ ಖಾದರ್ ಯು.ಟಿ. (ಮಂಗಳೂರು)

ಅ) ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದರೆ, ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)?

ಇ) ಕ್ಷೇತ್ರದ ಯಾವ ಪ್ರದೇಶದಲ್ಲಿ ಸದರಿ ಕಾಲೇಜನ್ನು ಪ್ರಾರಂಭಿಸಲಾಗುವುದು?

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಉಳ್ಳಾಲ ಹಾಗೂ ಬಂಟ್ವಾಳ ತಾಲ್ಲೂಕಿನ ಕನ್ಯಾನದಲ್ಲಿ ಹೊಸ ಕಾಲೇಜುಗಳನ್ನು ಪ್ರಾರಂಭಿಸುವ

ಕುರಿತು ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆ ಇವುಗಳನ್ನು ಆಧರಿಸಿ ಕ್ರಮ ಕೈಗೊಳ್ಳಲಾಗುವುದು.

ಇ) ಉದ್ಭವಿಸುವುದಿಲ್ಲ.

ಮೂಲಸೌಲಭ್ಯಗಳ ಕೊರತೆ

13 (6)

ಶ್ರೀ ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲಾ ಕೇಂದ್ರದಲ್ಲಿರುವ ಸರಕಾರಿ ಪದವಿ ಕಾಲೇಜು ಮೂಲ ಸೌಲಭ್ಯಗಳಿಂದ ವಂಚಿತವಾಗಿದ್ದು, ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ. ಸರ್ಕಾರ ಕೈಗೊಂಡ ಕ್ರಮಗಳೇನು(ವಿವರ ನೀಡುವುದು)

ಇ) ಕಾಲೇಜಿನಲ್ಲಿ ಕೊಠಡಿಗಳ ಕೊರತೆ, ಉಪನ್ಯಾಸಕರ ಕೊರತೆ ಹಾಗೂ ಪ್ರಯೋಗಾಲಯ ಸಮಸ್ಯಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಯಾದಗಿರಿಯಲ್ಲಿ ನೂತನವಾಗಿ ಸ್ನಾತಕೋತ್ತರ ಕೇಂದ್ರ ಪ್ರಾರಂಭಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು, ಪೂರ್ಣಕಾಲಿಕ ಉಪನ್ಯಾಸಕರು, ಪ್ರಯೋಗಾಲಯ, ಇನ್ನಿತರೆ ಮೂಲಭೂತ ಸೌಕರ್ಯಗಳು ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದಲ್ಲಿ ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು(ವಿವರ ಒದಗಿಸುವುದು)

ಶ್ರೀ ಸಿ.ಟಿ.ರವಿ

(ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.